**ಕರ್ನಾಟಕ ಸರ್ಕಾರ**

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂ: DTE-ADMI0SCH2/5/2024

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ ಬೆಂಗಳೂರು-560 001.
ದಿನಾಂಕ: 20-11-2024.

**-:: ಸುತ್ತೋಲೆ ::-**

**ವಿಷಯ :** **2024-25ನೇ** ಸಾಲಿಗೆ ಇಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿಶೇಷ ಪಾಲನೆ ಅಥವಾ ವಿಶೇಷ ವರ್ಗದ ಮಕ್ಕಳು (ಹೆಚ್.ಐ.ವಿ)/ಕುಷ್ಠರೋಗ ಪೀಡಿತ ಪೋಷಕರ ಮಕ್ಕಳಿಗೆ/ಪೀಡಿತ ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮತ್ತು ಉಚಿತ ಶಿಕ್ಷಣ ನೀಡಲು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ಅರ್ಜಿ ಆಹ್ವಾನಿಸುವ ಬಗ್ಗೆ.

**ಉಲ್ಲೇಖ :** ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಸರ್ಕಾರಿ ಆದೇಶ ಸಂ: ಇಡಿ 132 ಮಾಹಿತಿ 2013, ದಿನಾಂಕ: 31-08-2013 ಮತ್ತು ಸರ್ಕಾರಿ ಆದೇಶ ಸಂಖ್ಯೆ: ಇಡಿ 128 ಹೆಚ್‌ಪಿಟಿ 2022, ದಿನಾಂಕ: 28-02-2023.

**-0000000-**

ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸುವ ಸಿ.ಇ.ಟಿ/ಪಿ.ಜಿ ಸಿ.ಇ.ಟಿ ಪರೀಕ್ಷೆ ಮೂಲಕ ಸರ್ಕಾರಿ ಕೋಟಾದಡಿ ಸೀಟು ಹಂಚಿಕೆಯಾಗಿ ರಾಜ್ಯದ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಕಾಲೇಜುಗಳಲ್ಲಿ ಬಿ.ಇ., ಬಿ.ಟೆಕ್., ಬಿ.ಆರ್ಕ್ ಪದವಿ ಅಥವಾ ಎಂ.ಇ., ಎಂ.ಟೆಕ್. ಸ್ನಾತಕೋತ್ತರ ಪದವಿ ಮತ್ತು ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಗಳಲ್ಲಿ ಡಿಪ್ಲೋಮಾ ವ್ಯಾಸಂಗ ಮಾಡುತ್ತಿರುವ ವಿಶೇಷ ಪಾಲನೆ ಅಥವಾ ವಿಶೇಷ ವರ್ಗದ ಮಕ್ಕಳು (ಹೆಚ್.ಐ.ವಿ) / ಕುಷ್ಟರೋಗ ಪೀಡಿತರಾದ (ಬದುಕಿರುವ / ಮೃತ ಹೊಂದಿರುವ) ಪೋಷಕರ ಮಕ್ಕಳಿಗೆ ಹಾಗೂ ಪೀಡಿತ ವಿದ್ಯಾರ್ಥಿಗಳಿಗೆ 2024-25ನೇ ಸಾಲಿಗೆ ವಿದ್ಯಾರ್ಥಿವೇತನ ಮತ್ತು ಉಚಿತ ಶಿಕ್ಷಣ ನೀಡಲು ಉಲ್ಲೇಖಿತ ಸರ್ಕಾರದ ಆದೇಶಗಳಾನುಸಾರ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶ (State Scholarship Portal)ಯ ಆನ್‌ಲೈನ್ ಮೂಲಕ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಮುಂದುವರೆದು, ಸಂಬಂಧಪಟ್ಟ ಸಂಸ್ಥೆಗಳ ಪ್ರಾಂಶುಪಾಲರುಗಳು ಈ ಸುತ್ತೋಲೆಯನ್ನು ಸಂಸ್ಥೆಯ ಸೂಚನಾ ಫಲಕದಲ್ಲಿ ಪ್ರಕಟಿಸಿ, ಅರ್ಹ ವಿದ್ಯಾರ್ಥಿಗಳ ಗಮನಕ್ಕೆ ತರುವ ಬಗ್ಗೆ ಕ್ರಮ ವಹಿಸಬೇಕಾಗಿರುತ್ತದೆ ಹಾಗೂ ವಿದ್ಯಾರ್ಥಿಗಳು ಈ ಕೆಳಗೆ ತಿಳಿಸಿರುವ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ವೆಬ್ ಪೋರ್ಟಲ್‌ರಲ್ಲಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬೇಕಾಗಿರುತ್ತದೆ.

**Website : https://ssp.postmatric.karnataka.gov.in/**

ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸುವ ಮೊದಲು ವಿದ್ಯಾರ್ಥಿಗಳು / ಸಂಸ್ಥೆಯ ಪ್ರಾಂಶುಪಾಲರು ಈ ಕೆಳಗೆ ತಿಳಿಸಿರುವಂತೆ ಕ್ರಮ ವಹಿಸಿ ಅಗತ್ಯ ದಾಖಲೆಗಳನ್ನು ಈ ಕಛೇರಿಗೆ ದಿನಾಂಕ: 31-01-2025ರೊಳಗೆ ಸಲ್ಲಿಸುವುದು.

1. ಮೇಲೆ ತಿಳಿಸಿರುವ ಸೌಲಭ್ಯವನ್ನು ಪಡೆಯುತ್ತಿರುವ ವಿದ್ಯಾರ್ಥಿಗಳು ಸರ್ಕಾರದ ಬೇರೆ ಯಾವುದೇ ಯೋಜನೆ/ಸೌಲಭ್ಯ ಪಡೆದಿರುವುದಿಲ್ಲವೆಂದು ಪ್ರಾಂಶುಪಾಲರು ಖಚಿತ ಪಡಿಸಿಕೊಳ್ಳುವುದು.
2. ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸುವ ಸಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಸರ್ಕಾರಿ ಕೋಟಾದಡಿ ಸೀಟು ಹಂಚಿಕೆಯಾಗಿ ರಾಜ್ಯದ ಸರ್ಕಾರಿ/ಅನುದಾನಿತ/ಅನುದಾನರಹಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಪ್ರವೇಶ ಪಡೆದಂತಂಹ ವಿದ್ಯಾರ್ಥಿಗಳು ಈ ಯೋಜನೆಗೆ ಅರ್ಹರಾಗಿರುತ್ತಾರೆ.
3. ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ (ಅನುದಾನಿತ ಕೋರ್ಸಿಗಳ) ಡಿಪ್ಲೋಮಾ ಇನ್ ಪಾಲಿಟೆಕ್ನಿಕ್ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಈ ಯೋಜನೆಗೆ ಅರ್ಹರಾಗಿರುತ್ತಾರೆ.
4. ಕಾಮೇಡ್-ಕೆ/ಆಡಳಿತ ಮಂಡಳಿ ಕೋಟಾದಡಿ ಪ್ರವೇಶ ಪಡೆದಂತಂಹ ವಿದ್ಯಾರ್ಥಿಗಳು ಈ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.
5. **ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ವಿದ್ಯಾರ್ಥಿಯು ಸಾಮಾನ್ಯ ವರ್ಗದಡಿ (General Category) ಅರ್ಜಿಯನ್ನು ಸಲ್ಲಿಸಿದ ನಂತರ, Student SSP Acknowledgment letter, ಅಧಾರ್ ಕಾರ್ಡ್ ಮತ್ತು ದೃಢೀಕೃತ ಕುಟುಂಬದ ಪಡಿತರ ಚೀಟಿಯ ನಕಲು ಪ್ರತಿಗಳನ್ನು ಈ ಕಛೇರಿಗೆ ಸಲ್ಲಿಸುವುದು.**
6. **ವಿದ್ಯಾರ್ಥಿಯು ಅಥವಾ ಅವರ ತಂದೆ/ತಾಯಿ ಕುಷ್ಠ ರೋಗಕ್ಕೆ ಎಂ.ಡಿ.ಟಿ (ಮಲ್ಟಿ ಡ್ರಗ್ ಥೆರಪಿ) ಚಿಕಿತ್ಸೆ ಪಡೆದವರಾಗಿರಬೇಕು ಅಥವಾ ಹೆಚ್.ಐ.ವಿ./ಏಡ್ಸ್ ರೋಗಕ್ಕೆ ಎ.ಆರ್.ಟಿ. (ಆಂಟಿರೆಟ್ರೋವೈರಲ್ ಥೆರಪಿ) ಚಿಕಿತ್ಸೆ ಪಡೆದಿರುವ ಬಗ್ಗೆ ಜಿಲ್ಲಾ ಆರೋಗ್ಯ ಪ್ರಾಧಿಕಾರಗಳಿಂದ (District Surgeon) ದೃಢೀಕೃತ ಪ್ರಮಾಣ ಪತ್ರವನ್ನು ಪಡೆದು ಈ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸುವುದು.**

**(ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)**

**ನಿರ್ದೇಶಕರು**
**ತಾಂತ್ರಿಕ ಶಿಕ್ಷಣ ಇಲಾಖೆ**

**ಇವರಿಗೆ,**

1. **ಪ್ರಾಂಶುಪಾಲರು,** ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳಿಗೆ- ಮುಂದಿನ ಸೂಕ್ತ ಕ್ರಮಕ್ಕಾಗಿ.
2. **ಸಂಯೋಜನಾಧಿಕಾರಿಗಳು,** ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು. (ಇಲಾಖೆ ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸಲು).
3. ಹೆಚ್ಚುವರಿ ಪ್ರತಿ.